ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/29/ಸದಸ್ಯತ್ವ/2008-09

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-01.
ದಿನಾಂಕ: 4 .07.2018

## ಸುತ್ತೋಲೆ

ವಿಷಯ: ಯುವ ರೆಡ್ ಕ್ರಾಸ್ ಘಟಕಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ: ಇಡಿ 64 ವಿವಿಧ 2011, ದಿನಾಂಕ:22.12.2011.
2) ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:19.06.2012.
3) ಸರ್ಕಾರದ ಆದೇಶ ಸಂಖ್ಯೆ: ಇಡಿ 38 ವಿವಿಧ 2016, ದಿನಾಂಕ:17.06.2016.
4) ಪ್ರಧಾನ ಕಾರ್ಯದರ್ಶಿ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ ಇವರ ದಿ:24.05.2018 ರ ಪತ್ರ ಸಂಖ್ಯೆ:ಐಆರ್‌ಸಿಎಸ್/ವೈಆರ್‌ಸಿ/418/2018-19.

* * * *

XVನೇ ಕೇಂದ್ರ ಅಧಿನಿಯಮ-1920 ರಡಿ ಸ್ಥಾಪಿತವಾದ ಭಾರತೀಯ ರೆಡ್ ಕ್ರಾಸ್ ಸೊಸೈಟಿಯ ಬಹುಮುಖ್ಯ ಅಂಗವಾದ ಯುವ ರೆಡ್ ಕ್ರಾಸ್ ಘಟಕವನ್ನು ಪ್ರಾರಂಭಿಸಲು ಹಾಗೂ ಈ ಮೂಲಕ ಮಾನವೀಯತೆ, ನಿಷ್ಪಕ್ಷಪಾತ, ತಟಸ್ಥನೀತಿ, ಅಪರತಂತ್ರ, ಸ್ವಯಂಸೇವಾ ಮನೋಧರ್ಮ ಹಾಗೂ ಸರ್ವಲೌಕಿಕತ್ವದಂತಹ ತತ್ವಗಳನ್ನು ವಿದ್ಯಾರ್ಥಿಗಳಲ್ಲಿ ಮೈಗೂಡಿಸುವ ನಿಟ್ಟಿನಲ್ಲಿ ಯುವ ರೆಡ್ ಕ್ರಾಸ್ ಹೊಂದಿರುವ ಸಂಕಲ್ಪ ಹಾಗೂ ಉದ್ದೇಶಗಳನ್ನು ಈಡೇರಿಸಲು ಹಾಗೂ ಆರೋಗ್ಯ, ನಾಗರಿಕ ಹೊಣೆಗಾರಿಕೆ, ಸದ್ಭಾವನೆ ಮತ್ತು ಸ್ವಯಂ ಸೇವಾ ಮನೋಧರ್ಮಗಳಂತಹ ಆದರ್ಶ ಮತ್ತು ಪರಿಪಾಠಗಳನ್ನು ಯುವಕರಲ್ಲಿ ಸದೃಢಗೊಳಿಸುವುದಕ್ಕೆ ಅಭಿಮುಖವಾದ ರೆಡ್ ಕ್ರಾಸ್‌ನ ಪ್ರಯತ್ನಗಳಲ್ಲಿ ನೆರವಾಗಲು ಅನುವಾಗುವಂತೆ ಉಲ್ಲೇಖದಲ್ಲಿ ಓದಲಾದ ಕ್ರ.ಸಂ. (1) ರಿಂದ (3) ರಲ್ಲಿನ ಸರ್ಕಾರದ ಆದೇಶ ಹಾಗೂ ಈ ಕಛೇರಿಯ ಸುತ್ತೋಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸ್ಪಷ್ಟ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿರುತ್ತದೆ.

ಅದರಂತೆ, ಇಲಾಖಾ ವ್ಯಾಪ್ತಿಯ ಎಲ್ಲಾ ಪದವಿ ಕಾಲೇಜುಗಳಲ್ಲಿ ಇದುವರೆವಿಗೂ ಪ್ರಾರಂಭಿಸದೆ ಇರುವ ಕಾಲೇಜುಗಳು ಯುವ ರೆಡ್‌ಕ್ರಾಸ್ ಘಟಕಗಳನ್ನು ಪ್ರಾರಂಭಿಸಲು ಹಾಗೂ ಈ ಮೂಲಕ ವಿದ್ಯಾರ್ಥಿಗಳಲ್ಲಿ ಮಾನವೀಯತೆ, ನಿಷ್ಪಕ್ಷಪಾತ, ತಟಸ್ಥನೀತಿ, ಅಪರತಂತ್ರ, ಸ್ವಯಂಸೇವಾ ಮನೋಧರ್ಮ ಹಾಗೂ ಸರ್ವಲೌಕಿಕತ್ವದಂತಹ ತತ್ವಗಳ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯು ಹೊಂದಿರುವ ಸಂಕಲ್ಪ ಹಾಗೂ ಉದ್ದೇಶಗಳನ್ನು ಯುವ ರೆಡ್ ಕ್ರಾಸ್ ಘಟಕಗಳ ಮೂಲಕ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಯುವ ರೆಡ್ ಕ್ರಾಸ್ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ಸೂಚಿಸಲಾಗಿದೆ.

ಮುಂದುವರೆದು, ಯುವ ರೆಡ್‌ಕ್ರಾಸ್ ಘಟಕಗಳಿಗೆ ವಿದ್ಯಾರ್ಥಿಗಳಿಂದ ಸಂಗ್ರಹಿಸಲಾಗುವ ಮೊತ್ತವನ್ನು ಸಂಪೂರ್ಣವಾಗಿ ರೆಡ್‌ಕ್ರಾಸ್ ಘಟಕಗಳ ಚಟುವಟಿಕೆಗಳಿಗೆ ಮಾತ್ರ ಬಳಸಿಕೊಳ್ಳತಕ್ಕದ್ದು.

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ;

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.- ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2) ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1. ಪ್ರಧಾನ ಕಾರ್ಯದರ್ಶಿ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ, ನಂ.26, ರೆಡ್ ಕ್ರಾಸ್ ಭವನ, 1ನೇ ಮಹಡಿ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು-560001.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.